# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಎಚ್. ರಸ್ತೆ, ತುಮಕೂರು – 572 103

ದಿನಾಂಕ:03.11.2025

ಸಂಖ್ಯೆ:ತು.ವಿ:ಶೈ.ವಿ:ಪಿ.ಜಿ:2025-26/8301

## ಸುತ್ತೋಲೆ

**ವಿಷಯ: ಸ್ನಾತಕೋತ್ತರ ವಿಭಾಗ/ಕೋರ್ಸ್‌ಗಳ ವಿದ್ಯಾರ್ಥಿಗಳ ಪ್ರವೇಶಾನುಮೋದನೆ ಕುರಿತು.**

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ 2025-26 ನೇ ಶೈಕ್ಷಣಿಕ ಸಾಲಿನ ಪ್ರಥಮ ಮತ್ತು ದ್ವಿತೀಯ ವರ್ಷದ ವಿವಿಧ ಸ್ನಾತಕೋತ್ತರ ಕೋರ್ಸ್‌ಗಳ ಪ್ರವೇಶಾತಿಗಾಗಿ ಅಧಿಸೂಚನೆಗಳನ್ನು ಹೊರಡಿಸಿ ಅದರಂತೆ ಪ್ರವೇಶಾತಿಯನ್ನು ನೀಡಲಾಗಿರುತ್ತದೆ.

ಪ್ರವೇಶಾತಿಯನ್ನು ಪಡೆದ ವಿದ್ಯಾರ್ಥಿಗಳ ಪ್ರವೇಶಾನುಮೋದನೆ ಪಟ್ಟಿ ಮತ್ತು ಪ್ರವೇಶ ಶುಲ್ಕದ ರಶೀದಿಗಳನ್ನು ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸುವಂತೆ ತಿಳಿಸಲಾಗಿದ್ದು, ಕೆಲವು ವಿಭಾಗ / ಕಾಲೇಜುಗಳು ಮಾತ್ರ ಸಲ್ಲಿಸಿರುತ್ತಾರೆ.

ಪ್ರಥಮ ಮತ್ತು ದ್ವಿತೀಯ ವರ್ಷಕ್ಕೆ ಪ್ರವೇಶ ಪಡೆದಿರುವ ವಿದ್ಯಾರ್ಥಿಗಳ ಪ್ರವೇಶಾನುಮೋದನೆ ಪಟ್ಟಿ, ಶುಲ್ಕ ರಶೀದಿ(ಹಣಕಾಸು ಅಧಿಕಾರಿ/ವಿಭಾಗದಿಂದ ಧೃಡೀಕರಿಸಿ) ಮತ್ತು ಇತರೆ ದಾಖಲೆಗಳನ್ನು ಸಲ್ಲಿಸದಿರುವ ವಿಭಾಗ / ಕಾಲೇಜುಗಳು ದಿನಾಂಕ:6.11.2025 ರೊಳಗಾಗಿ ವಿಶ್ವವಿದ್ಯಾನಿಲಯಕ್ಕೆ ಕಡ್ಡಾಯವಾಗಿ ಸಲ್ಲಿಸುವುದು. ಒಂದು ವೇಳೆ ನಿಗದಿತ ಅವಧಿಯೊಳಗೆ ಸಲ್ಲಿಸದಿದ್ದರೆ ತಮ್ಮ ವಿಭಾಗ / ಕಾಲೇಜುಗಳಲ್ಲಿ ಪ್ರಸ್ತುತ ಶೈಕ್ಷಣಿಕ ವರ್ಷ ಪ್ರವೇಶಾತಿಯಾಗಿರುವುದಿಲ್ಲ ಎಂದು ಪರಿಗಣಿಸಲಾಗುವುದು. ತದನಂತರ ಮನವಿಯನ್ನು ಸಲ್ಲಿಸಿದರೆ ಪರಿಗಣಿಸಲಾಗುವುದಿಲ್ಲ.

ವಿದ್ಯಾರ್ಥಿವೇತನ ಹಾಗೂ ಇತರೆ ಸೌಲಭ್ಯಗಳಿಗಾಗಿ ಅರ್ಜಿ ಸಲ್ಲಿಸುವಂತಹ ವಿದ್ಯಾರ್ಥಿಗಳಿಗೆ ಅನುಕೂಲವಾಗುವ ದೃಷ್ಟಿಯಿಂದ ದಿನಾಂಕ:10.11.2025 ರಿಂದ ಸ್ನಾತಕೋತ್ತರ ವಿಭಾಗ / ಕೋರ್ಸ್‌ಗಳ ವಿದ್ಯಾರ್ಥಿಗಳ ಪ್ರವೇಶಾನುಮೋದನೆಯು ಪ್ರಾರಂಭವಾಗಲಿದ್ದು, ಪ್ರಥಮ ವರ್ಷದ ವಿದ್ಯಾರ್ಥಿಗಳ ಮೂಲ ದಾಖಲೆಗಳನ್ನು ಪರಿಶೀಲನೆಗೆ ಮುದ್ದಾಂ ಸಲ್ಲಿಸಿ ಪ್ರವೇಶಾನುಮೋದನೆಯನ್ನು ಪಡೆಯುವಂತೆ ತಿಳಿಸಲಾಗಿದೆ.

ಈ ಹಿಂದಿನ ಶೈಕ್ಷಣಿಕ ಸಾಲಿನಲ್ಲಿ ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸುತ್ತಿದ್ದಂತೆಯೇ ನಿಗದಿತ ನಮೂನೆಯಲ್ಲಿ 2025-26 ನೇ ಶೈಕ್ಷಣಿಕ ಸಾಲಿನ ಪ್ರಥಮ ಮತ್ತು ದ್ವಿತೀಯ ವರ್ಷದ ವಿದ್ಯಾರ್ಥಿಗಳ ಪ್ರವೇಶಾನುಮೋದನೆ ಪಟ್ಟಿಯನ್ನು ಸಲ್ಲಿಸುವಂತೆ ಸಲ್ಲಿಸುವುದು.

**ಸೂಚನೆಗಳು:**

- **ವಿದ್ಯಾರ್ಥಿಗಳ ಮೂಲ ಅಂಕಪಟ್ಟಿಗಳು, ಪರೀಕ್ಷಾ ವಿಭಾಗದಿಂದ ಮುದ್ರಿತವಾಗಿ ವಿತರಿಸದಿದ್ದಲ್ಲಿ / ಜಾಲತಾಣದಿಂದ ಪಡೆದ ಅಂಕಪಟ್ಟಿಗಳನ್ನು ಸಂಬಂಧಿಸಿದ ವಿಭಾಗಗಳ ಅಧ್ಯಕ್ಷರು / ಸಂಯೋಜಕರು / ಕಾಲೇಜುಗಳ ಪ್ರಾಂಶುಪಾಲರು / ವಿಭಾಗಗಳ ಮುಖ್ಯಸ್ಥರು ಪರಿಶೀಲಿಸಿ ಧೃಡೀಕರಿಸುವುದು ಸಲ್ಲಿಸುವುದು.**
- **ಪರೀಕ್ಷಾ ವಿಭಾಗದಿಂದ Digilockerನಲ್ಲಿ ಅಪ್‌ಲೋಡ್ ಮಾಡಿರುವ ಅಂಕಪಟ್ಟಿಗಳನ್ನು ಪರಿಶೀಲಿಸಲು Digilocker appನ್ನು playstoreನಿಂದ mobileನಲ್ಲಿ ಡೌನ್ ಲೋಡ್ ಮಾಡಿಕೊಳ್ಳುವುದು. (ನೋಂದಣಿಯ ಅವಶ್ಯಕತೆ ಇರುವುದಿಲ್ಲ) app open ಮಾಡಿದ ನಂತರ Scannerನ್ನು ಬಳಸಿ ವಿದ್ಯಾರ್ಥಿಗಳ ಅಂಕಪಟ್ಟಿಗಳ ಮೇಲಿರುವ QR codeನ್ನು scan ಮಾಡಿ ಪರಿಶೀಲಿಸಿ, ವಿಭಾಗಗಳ ಅಧ್ಯಕ್ಷರು / ಸಂಯೋಜಕರು / ಕಾಲೇಜುಗಳ ಪ್ರಾಂಶುಪಾಲರು / ವಿಭಾಗಗಳ ಮುಖ್ಯಸ್ಥರು ಧೃಡೀಕರಿಸಿ ಇತರ ಮೂಲದಾಖಲೆಗಳೊಂದಿಗೆ ಪ್ರವೇಶಾನುಮೋದನೆ ವೇಳೆಗೆ ಪರಿಶೀಲನೆಗಾಗಿ ಸಲ್ಲಿಸುವುದು.**

ಆದೇಶದ ಮೇರೆಗೆ

ಉಪಕುಲಸಚಿವರು

ಶೈಕ್ಷಣಿಕ ವಿಭಾಗ

ತುಮಕೂರು ವಿಶ್ವವಿದ್ಯಾನಿಲಯ

ತುಮಕೂರು

ಗೆ,

1. ಅಧ್ಯಕ್ಷರು / ಸಂಯೋಜಕರು, ಎಲ್ಲಾ ಸ್ನಾತಕೋತ್ತರ ಅಧ್ಯಯನ ಮತ್ತು ಸಂಶೋಧನಾ ವಿಭಾಗಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ ಘಟಕ ಮತ್ತು ಸಂಯೋಜಿತ ಸ್ನಾತಕೋತ್ತರ ಪದವಿ ಕಾಲೇಜುಗಳು, ತುಮಕೂರು. ವಿಶ್ವವಿದ್ಯಾನಿಲಯ, ತುಮಕೂರು
3. ಸಂಯೋಜಕರು, ಶಿರಾ ಸ್ನಾತಕೋತ್ತರ ಕೇಂದ್ರ, ತುಮಕೂರು ವಿಶ್ವವಿದ್ಯಾನಿಲಯ, ಭುವನಹಳ್ಳಿ, ಶಿರಾ
4. ಸಂಯೋಜಕರು, ಸ್ನಾತಕೋತ್ತರ ಅಧ್ಯಯನ ಕೇಂದ್ರ, ತುಮಕೂರು ವಿಶ್ವವಿದ್ಯಾನಿಲಯ, ತಿಪಟೂರು.

ಪ್ರತಿ: ಕಚೇರಿ ಪ್ರತಿ